For more job news visit : www.kpscvaani.com

ಕರ್ನಾಟಕ ಲೋಕ ಸೇವಾ ಆಯೋಗ, ಉದ್ಯೋಗಸೌಧ, ಬೆಂಗಳೂರು-01

ಸಂಖ್ಯೆ: KPSCKA/EXA2/MSCL/39/2025-EXAM-2/158 **ದಿನಾಂಕ:** 18-04-2026

-:ಪ್ರಕಟಣೆ:-

ಆಯೋಗದ ಅಧಿಸೂಚನೆ ಸಂಖ್ಯೆ:ಇ(2)597/2023-24/ಪಿಎಸ್‌ಸಿ, ದಿನಾಂಕ: 15-03-2024 ರಂದು ಅಧಿಸೂಚಿಸಲಾದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿನ ಉಳಿಕೆ ಮೂಲ ವೃಂದದ 150 ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ಹುದ್ದೆಗಳ ನೇಮಕಾತಿಗೆ ಸಂಬಂಧಿಸಿದಂತೆ ದಿನಾಂಕ:07-12-2024 ಹಾಗೂ ದಿನಾಂಕ: 08-12-2024 ರಂದು ಸ್ಪರ್ಧಾತ್ಮಕ ಪರೀಕ್ಷೆಗಳನ್ನು ನಡೆಸಲಾಗಿದ್ದು ಹಾಗೂ ದಿನಾಂಕ:20-02-2026 ರಂದು ತಾತ್ಕಾಲಿಕ ಆಯ್ಕೆಪಟ್ಟಿಯನ್ನು ಪ್ರಕಟಿಸಲಾಗಿರುತ್ತದೆ.

ಸದರಿ ಹುದ್ದೆಗಳ ನೇಮಕಾತಿಗೆ ಸಂಬಂಧಿಸಿದಂತೆ ಅಭ್ಯರ್ಥಿಗಳಿಗೆ ಜಾರಿ ಮಾಡಲಾದ ಪ್ರವೇಶ ಪತ್ರದಲ್ಲಿ **ಅಭ್ಯರ್ಥಿಯು ಕಾರ್ಬನ್ ರಹಿತ ಓ.ಎಂ.ಆರ್.ಉತ್ತರ ಹಾಳೆಯ ಪ್ರತಿ (Candidate copy) ಯನ್ನು ಅಂತಿಮ ಆಯ್ಕೆಪಟ್ಟಿ ಪ್ರಕಟಿಸುವವರೆಗೆ ಜೋಪಾನವಾಗಿ ಸಂರಕ್ಷಿಸಿಟ್ಟುಕೊಳ್ಳಬೇಕು ಮತ್ತು ಆಯೋಗವು ಯಾವುದೇ ಸಂದರ್ಭದಲ್ಲಿ ಹಾಜರುಪಡಿಸಲು ಸೂಚಿಸಿದ್ದಲ್ಲಿ, ತಪ್ಪದೇ ಅದೇ ಪ್ರತಿಯನ್ನು ಹಾಜರುಪಡಿಸತಕ್ಕದ್ದು. ತಪ್ಪಿದ್ದಲ್ಲಿ ಅಭ್ಯರ್ಥಿತ್ವವನ್ನು ರದ್ದುಪಡಿಸಲಾಗುವುದು ಎಂದು ತಿಳಿಸಲಾಗಿರುತ್ತದೆ.**

ದಿನಾಂಕ:17-04-2026ರಂದು ನಡೆದ ಆಯೋಗದ ಸಭೆಯ ನಿರ್ಣಯದ ಮೇರೆಗೆ ಉಳಿಕೆ ಮೂಲ ವೃಂದದ 150 ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ಹುದ್ದೆಗಳ ತಾತ್ಕಾಲಿಕ ಆಯ್ಕೆಪಟ್ಟಿಯಲ್ಲಿ ಆಯ್ಕೆಯಾಗಿರುವ ಎಲ್ಲಾ ಅಭ್ಯರ್ಥಿಗಳು ತಮ್ಮ ಕಾರ್ಬನ್ ರಹಿತ ಓ.ಎಂ.ಆರ್.ಉತ್ತರ ಹಾಳೆಯ ಪ್ರತಿ (Candidate copy)ಯನ್ನು **ದಿ:24-04-2026ರೊಳಗೆ** ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗ ಸೌಧ, ಬೆಂಗಳೂರು–560001. ಇಲ್ಲಿಗೆ ಖುದ್ದು ಹಾಜರಾಗಿ ಸಲ್ಲಿಸುವಂತೆ ತಿಳಿಸಿದೆ. ತಪ್ಪಿದ್ದಲ್ಲಿ ಸದರಿ ಅಭ್ಯರ್ಥಿಗಳ ಅಭ್ಯರ್ಥಿತ್ವವನ್ನು ರದ್ದುಪಡಿಸಲಾಗುವುದೆಂದು ಈ ಮೂಲಕ ತಿಳಿಸಿದೆ.

ಸಹಿ/-
(ಜ್ಯೋತಿ ಕೆ.)
ಕಾರ್ಯದರ್ಶಿ,
ಕರ್ನಾಟಕ ಲೋಕಸೇವಾ ಆಯೋಗ.